# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1517 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತಾರಾಮ ಬುಡ್ನ ಸಿದ್ದಿ<br>(ನಾಮ ನಿರ್ದೇಶಿತರು) |
| ಉತ್ತರಿಸುವ ದಿನಾಂಕ: | 19-12-2025 |
| ಉತ್ತರಿಸುವವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಉತ್ತರ ಕನ್ನಡ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಬಡ ಹಿಂದುಳಿದ ವರ್ಗಗಳ ಕಾಲೇಜು ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳ ಬೇಡಿಕೆಗೆ ತಕ್ಕಂತೆ ವಸತಿ ನಿಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಉತ್ತರ ಕನ್ನಡ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒಟ್ಟು 166 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಈ ವಿದ್ಯಾರ್ಥಿ ನಿಲಯಗಳಲ್ಲಿ 21975 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗಿದ್ದು, ವಿವರಗಳು ಕೆಳಕಂಡಂತಿವೆ:-
<table>
<tr><th>ಜಿಲ್ಲೆಯ ಹೆಸರು</th><th>ವಿದ್ಯಾರ್ಥಿ ನಿಲಯಗಳ ಸಂಖ್ಯೆ</th><th>ಮಂಜೂರಾತಿ ಸಂಖ್ಯೆ</th></tr>
<tr><td>ಬೆಳಗಾವಿ</td><td>70</td><td>9700</td></tr>
<tr><td>ಧಾರವಾಡ</td><td>59</td><td>7525</td></tr>
<tr><td>ಉತ್ತರ ಕನ್ನಡ</td><td>37</td><td>4750</td></tr>
<tr><td>ಒಟ್ಟು</td><td>166</td><td>21975</td></tr>
</table>
</td></tr>
<tr><td>ಆ</td><td>ಗ್ರಾಮೀಣ ಪ್ರದೇಶಗಳಿಂದ ವಿವಿಧ ಕಾಲೇಜು ಮತ್ತು ಉನ್ನತ ಶಿಕ್ಷಣಕ್ಕಾಗಿ ಜಿಲ್ಲೆಯಲ್ಲಿನ ಪಟ್ಟಣ / ನಗರಗಳಿಗೆ ಬರುವ ಹಿಂದುಳಿದ ವರ್ಗಗಳ ಕಾಲೇಜು ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದ್ದು ಮುಂದಿನ ಶಿಕ್ಷಣಕ್ಕಾಗಿ ವಸತಿ ನಿಲಯಗಳು ಮತ್ತು ಇನ್ನಿತರ ಸೌಲಭ್ಯ ಗಳನ್ನು ಒದಗಿಸಲು ಸರ್ಕಾರದ ಕ್ರಮವೇನು?</td><td>2025-26ನೇ ಸಾಲಿನ ಆಯವ್ಯಯದಲ್ಲಿ 31 ಮೆಟ್ರಿಕ್ ನಂತರದ ಬಾಲಕರ ಮತ್ತು 31 ಮೆಟ್ರಿಕ್ ನಂತರದ ಬಾಲಕಿಯರ ಹೀಗೆ ಒಟ್ಟು 62 ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗಿದ್ದು, 6200 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗಿರುತ್ತದೆ.<br><br>ಅದರಂತೆ, ಉತ್ತರ ಕನ್ನಡ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ತಲಾ ಒಂದು ಬಾಲಕರ ಮತ್ತು ಒಂದು ಬಾಲಕಿಯರ ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತಿದೆ.</td></tr>
</table>

ಸಂಖ್ಯೆ: ಹಿಂವಕ 1264 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.